ಗ್ರಾಮೀಣಾಭಿವೃದ್ಧಿ ವಿಷಯದಲ್ಲಿ ಸ್ನಾತಕೋತ್ತರ ಪದವಿ

೯೧೦ ಶ್ರೀ ವೇದಾಂತ ಹೆಬ್ಬಿಗೆ (ಕೃಷ್ಣ ರಾಜ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ಎಷ್ಟು ವಿಶ್ವ ವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಮಟ್ಟದ ಪದವಿಯಲ್ಲಿ ಗ್ರಾಮೀಣಾಭಿವೃದ್ಧಿ ಅಧ್ಯಯನವು ಒಂದು ವಿಷಯವಾಗಿದೆ ?

ಆ) ಈ ವಿಶ್ವ ವಿದ್ಯಾನಿಲಯಗಳಲ್ಲಿ ಇದು ವರೆವಿಗೂ ಈ ವಿಷಯದಲ್ಲಿ ಸ್ನಾತ ಕೋತ್ತರ ಪದವಿ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ?

ಇ) ಗ್ರಾಮೀಣಾಭಿವೃದ್ಧಿ ವಿಷಯದಲ್ಲಿ ವಿಶೇಷ ಶಿಕ್ಷಣ ಪಡೆದ ಇವರುಗಳನ್ನು ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯಿತಿಗಳಲ್ಲಿ ಉದ್ಯೋಗಕ್ಕೆ ತೆಗೆದುಕೊಳ್ಳಲು ಸರ್ಕಾರದವರು ಕ್ರಮ ಕೈಗೊಂಡಿದ್ದಾರೆಯೆ ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಮಂತ್ರಿಗಳು).—

ಅ) ಬೆಂಗಳೂರು ವಿಶ್ವ ವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಮಟ್ಟದ ಪದವಿಯಲ್ಲಿ ಮತ್ತು ಕರ್ನಾಟಕ ವಿಶ್ವ ವಿದ್ಯಾನಿಲಯದಲ್ಲಿ ಅರ್ಥ ಶಾಸ್ತ್ರ ವಿಷಯದಲ್ಲಿ ಗ್ರಾಮೀಣಾಭಿವೃದ್ಧಿ ಒಂದು ವಿಷಯವಾಗಿದೆ ?

ಆ) ಬೆಂಗಳೂರು ವಿಶ್ವ ವಿದ್ಯಾನಿಲಯ ೧೮೦ ಕರ್ನಾಟಕ ವಿಶ್ವ ವಿದ್ಯಾನಿಲಯ ೩೨೫,

ಇ) ಇನ್ನೂ ಇಲ್ಲ.

ಅರಕಲಗೂಡು ತಾಲ್ಲೂಕಿನಲ್ಲಿರುವ ಪ್ರಾಥಮಿಕ ಶಾಲೆಗಳ ಕಟ್ಟಡಗಳು

೮೦೩. ಶ್ರಿ ಕೆ. ಬಿ. ಮಲ್ಲಪ್ಪ (ಅರಕಲ ಗೂಡು) .—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

೧) ಅರಕಲಗೂಡು ತಾಲ್ಲೂಕಿನಲ್ಲಿ ಎಷ್ಟು ಪ್ರಾಥಮಿಕ ಶಾಲೆಗಳ ಕಟ್ಟಡಗಳಿವೆ ?

೨) ಕಟ್ಟಡಗಳಿಲ್ಲದ ಶಾಲೆಗಳೆಷ್ಟು ?

೩) ಹಾಲಿ ಇರತಕ್ಕ ಕಟ್ಟಡಗಳ ಪೈಕಿ ಉಪಯೋಗಕ್ಕೆ ಬಾರದೆ ಇರುವ ಕಟ್ಟಡಗಳೆಷ್ಟು ?

೪) ಉಪಯೋಗಕ್ಕೆ ಬಾರದ ಕಟ್ಟಡಗಳ ದುರಸ್ತಿಗಾಗಿ ಏನು ವ್ಯವಸ್ಥೆ ಮಾಡಲಾಗಿದೆ ?

೫) ಕಟ್ಟಡಗಳಿಲ್ಲದ ಶಾಲೆಗಳಿಗೆ ಕಟ್ಟಡ ನಿರ್ಮಿಸಲು ಏನು ವ್ಯವಸ್ಥೆ ಮಾಡಲಾಗಿದೆ.

ಶ್ರೀ ಡಿ. ಮಂಜುನಾಥ್(ಶಿಕ್ಷಣ ಸಚಿವರು).—

೧) ೨೫೦

೨) ೨೩

೩) ೮೮

೪) ಜಿಲ್ಲಾಧಿಕಾರಿಗಳಿಗೆ ಮತ್ತು ಕ್ಷೇತ್ರಾಭಿವೃದ್ಧಿ ಅಧಿಕಾರಿಗಳಿಗೆ ಜರೂರು ದುರಸ್ತಿಯನ್ನು ಆರ್. ಆರ್. ಇ. ಪಿ. ಯೋಜನೆಯಲ್ಲಿ ಕೈಗೊಳ್ಳುವಂತೆ ಕೋರಲಾಗಿದೆ.

೫) ಜಿಲ್ಲಾಧಿಕಾರಿಗಳಿಗೆ ವಿಶೇಷ ಜಿಲ್ಲಾಧಿಕಾರಿಗಳು ಅಭಿವೃದ್ಧಿ ಶಾಖೆ ಮತ್ತು ಎಕ್ಸ್ ಅಫಿಷಿಯೋ ಪ್ರಾಜೆಕ್ಟ್ ಡೈರೆಕ್ಟರ್ (ಡಿ. ಆರ್. ಡಿ ಎಸ್.) ಹಾಗೂ ಮತ್ತು ಕ್ಷೇತ್ರಾಭಿವೃದ್ಧಿ ಅಧಿಕಾರಿಗಳಿಗೆ ಎಲ್ಲಾ ಕಟ್ಟಡಗಳನ್ನು ನಿರ್ಮಿಸಲು ಕೋರಲಾಗಿದೆ ಇನ್ನು ಮುಂದೆ ಇವು ಜಿಲ್ಲಾ ಪರಿಷತ್ ವ್ಯಾಪ್ತಿಗೆ ಬರುವುದರಿಂದ ಪರಿಷತ್‌ನ್ನು ವಿನಂತಿಸುವಂತೆ ಪ್ರಾಥಮಿಕ ಶಿಕ್ಷಣ ನಿರ್ದೇಶಕರಿಗೆ ತಿಳಿಸಲಾಗುತ್ತಿದೆ.

ಅಧ್ಯಕ್ಷರು.—ಈಗ ಲಿಖಿತ ಮೂಲಕ ಉತ್ತರಿಸುವ ಉತ್ತರದ ಪಟ್ಟಿಯನ್ನು ಸದನದ ಮುಂದೆ ಮಂಡಿಸುವುದು.